# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1040 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 23-02-2024. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನಾಥರು, ಸಾಮಾಜಿಕ ಸಂಘರ್ಷಕ್ಕೆ ಒಳಗಾದವರು, ಕೋವಿಡ್ ನಿಂದ ಏಕ ಪಾಲಕರನ್ನು ಕಳೆದುಕೊಂಡ ಮಕ್ಕಳಿಗೆ ನೆರವಾಗಬೇಕಿದ್ದ "ಪ್ರಾಯೋಜಕತ್ವ" ಯೋಜನೆಗೆ ಅನುದಾನ ಬಿಡುಗಡೆ ಯಾಗದ ಕಾರಣ, ಸಾವಿರಾರು ಅರ್ಹ ಫಲಾನುಭವಿಗಳು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | "ಪ್ರಾಯೋಜಕತ್ವ" ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಸರ್ಕಾರದ ಶೇಕಡ 60 ಮತ್ತು ರಾಜ್ಯ ಸರ್ಕಾರದ ಶೇಕಡ 40ರ ಅನುಪಾತದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>2022-23ನೇ ಸಾಲಿನವರೆಗೆ ಸದರಿ ಯೋಜನೆಯನ್ನು ಖಜಾನೆ-2ರ ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿತ್ತು. ಆದರೆ ಕೇಂದ್ರ ಸರ್ಕಾರವು ಎಲ್ಲಾ ಕೇಂದ್ರ ಪುರಸ್ಕೃತ ಯೋಜನೆಗಳನ್ನು ಕಡ್ಡಾಯವಾಗಿ ಪಿ.ಎಫ್.ಎಂ.ಎಸ್ ತಂತ್ರಾಂಶದ ಮೂಲಕವೇ ಅನುಷ್ಠಾನಗೊಳಿಸಲು ನಿರ್ದೇಶಿಸಲಾಗಿರುತ್ತದೆ.<br><br>ಮುಂದುವರೆದಂತೆ, 2023-24ನೇ ಸಾಲಿಗೆ ಪ್ರಾಯೋಜಕತ್ವ ಕಾರ್ಯಕ್ರಮದ ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಪ್ರತ್ಯೇಕವಾಗಿ ಬಜೆಟ್ ಲೈನ್ ಅನ್ನು ಸೃಜಿಸಲು ದಿನಾಂಕ: 20.09.2023ರ ಪತ್ರದಲ್ಲಿ ತಿಳಿಸಿರುತ್ತಾರೆ. ಅದರಂತೆ ದಿನಾಂಕ:12.01.2024ರ ಆರ್ಥಿಕ ಇಲಾಖೆಯ ಪತ್ರದನ್ವಯ ಪ್ರಾಯೋಜಕತ್ವ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಹೊಸದಾಗಿ ಲೆಕ್ಕ ಶೀರ್ಷಿಕೆಗಳನ್ನು ಸೃಜಿಸಿ ನೀಡಿರುತ್ತಾರೆ.<br><br>ಈ ಮೇಲಿನಂತೆ ಆಡಳಿತಾತ್ಮಕ ಹಾಗೂ ತಾಂತ್ರಿಕ ತೊಂದರೆಗಳಿಂದಾಗಿ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗುವುದು ತಡವಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಪ್ರಸಕ್ತ ಆರ್ಥಿಕ ವರ್ಷದಲ್ಲಿ "ಪ್ರಾಯೋಜಕತ್ವ" ಯೋಜನೆಯಡಿ ಆಯ್ಕೆಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ಅವರಿಗೆ ನೀಡಬೇಕಾಗಿರುವ ಸಹಾಯಧನದ ಮೊತ್ತವೆಷ್ಟು; | 2023-24ನೇ ಸಾಲಿಗೆ ಪ್ರಾಯೋಜಕತ್ವ ಕಾರ್ಯಕ್ರಮದಡಿ (ಡಿಸೆಂಬರ್-2023ರ ಅಂತ್ಯಕ್ಕೆ) ಒಟ್ಟು 8558 ಮಕ್ಕಳನ್ನು ಗುರುತಿಸಲಾಗಿರುತ್ತದೆ. ಸದರಿ ಫಲಾನುಭವಿಗಳಿಗೆ ಮಾಹೆಯಾನ ರೂ.4,000/-ಗಳಂತೆ ವಾರ್ಷಿಕವಾಗಿ ಕೇಂದ್ರ ಸರ್ಕಾರದ (ಶೇಕಡ 60) ರೂ.24,64,70,400/- ಗಳು ಹಾಗೂ ರಾಜ್ಯ ಸರ್ಕಾರದ (ಶೇಕಡ 40) ರೂ.16,43,13,600/-ಗಳ ನ್ನೊಳಗೊಂಡಂತೆ ಒಟ್ಟಾರೆಯಾಗಿ ರೂ.41,07,84,000/-ಗಳ ಧನಸಹಾಯವನ್ನು ನೀಡಬೇಕಾಗಿರುತ್ತದೆ. |

| | | |
|---|---|---|
| ಇ) | ಪ್ರಸಕ್ತ ಆರ್ಥಿಕ ವರ್ಷದಲ್ಲಿ ಸದರಿ "ಪ್ರಾಯೋಜಕತ್ವ" ಯೋಜನೆಯಡಿ ಆಯ್ಕೆಯಾಗಿರುವ ಎಷ್ಟು ಜನ ಫಲಾನುಭವಿಗಳಿಗೆ ಸಹಾಯಧನವನ್ನು ಈಗಾಗಲೇ ನೀಡಲಾಗಿದೆ; | 2023-24ನೇ ಸಾಲಿಗೆ ಸದರಿ ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗದ ಕಾರಣ ಫಲಾನುಭವಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಸದರಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಅನುದಾನ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗಿದೆ. |
| ಈ) | "ಪ್ರಾಯೋಜಕತ್ವ" ಯೋಜನೆಯಡಿ ಸಹಾಯಧನ ನೀಡಲು ಬಾಕಿ ಇರುವ ಎಲ್ಲಾ ಫಲಾನುಭವಿಗಳಿಗೆ ಯಾವ ಕಾಲಮಿತಿಯೊಳಗೆ ಪಾವತಿ ಮಾಡಲಾಗುವುದು? | 2023-24ನೇ ಸಾಲಿಗೆ ಸದರಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ 60% ಅನುದಾನ ಬಿಡುಗಡೆಯಾದ ಕೂಡಲೇ ರಾಜ್ಯ ಸರ್ಕಾರದ 40% ಅನುದಾನದೊಂದಿಗೆ ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು. |

ಮಮಇ 18 ಮಭಾಬ 2024

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.